**All India Radio: Bangalore**
**Regional Bulletin In Kannada**
**06.02.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**06.02.2025 / 2.30 p.m.**

**<><><><>**

ಮುಖ್ಯಾಂಶಗಳು

1. ಸಮಯ ನಿರ್ವಹಣೆ ರೂಢಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಪ್ರಧಾನಿ ಕರೆ
2. ಅಂತಾರಾಷ್ಟ್ರೀಯ ವಾಣಿಜ್ಯ ಮೇಳ : ಉತ್ಪಾದನೋತ್ತರ ಕೃಷಿ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಚಾಲನೆ
3. ರೆಪೋದರ ಶೇಕಡ ೫.೨೫ರಲ್ಲೇ ಮುಂದುವರಿಕೆ ; ಸಾಲ ವಸೂಲಾತಿಗೆ ಸಂಬಂಧಿಸಿದಂತೆ ಕರಡು ಮಾರ್ಗಸೂಚಿ ಹೊರಡಿಸಲು ಯೋಜನೆ - ಆರ್‌ಬಿಐ ಗವರ್ನರ್
4. ಹಾವೇರಿ ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಏಕಾಗ್ರತೆ ಕಾಪಾಡಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಿಸಲು ಡಿಜಿಟಲ್ ಲಾಕ್ ಪ್ರಯೋಗ

<><><><>

ವಿದ್ಯಾರ್ಥಿಗಳು ಸಮಯ ನಿರ್ವಹಣೆ ರೂಢಿಸಿಕೊಳ್ಳಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ವಿದ್ಯಾರ್ಥಿಗಳು ಒತ್ತಡವಿಲ್ಲದೇ ಪರೀಕ್ಷೆಗಳನ್ನು ಹೇಗೆ ಎದುರಿಸಬಹುದು ಎನ್ನುವ ಬಗ್ಗೆ ಪ್ರಧಾನಿಯವರು ಇಂದು ಪ್ರಸಾರವಾದ ಪರೀಕ್ಷಾ ಪೇ ಚರ್ಚಾ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಸಮಯದ ಸದ್ಬಳಕೆ ಕುರಿತು ಸಲಹೆ ನೀಡಿದರು. ವಿದ್ಯಾರ್ಥಿಗಳು ಹಿಂದಿನ ದಿನ ರಾತ್ರಿಯೇ ನಾಳೆ ಮಾಡಬೇಕಾದ ಅಭ್ಯಾಸ ಬಗ್ಗೆ ವೇಳಾಪಟ್ಟಿಯನ್ನು ನಿಗದಿಪಡಿಸಿಕೊಳ್ಳಬೇಕು ಎಂದರು. ಪ್ರತಿ ವಿದ್ಯಾರ್ಥಿಗಳಿಗೆ ತಮ್ಮದೇ ಆದ ವಿಶಿಷ್ಟ ಕಲಿಕೆ ಶೈಲಿ ಇರುತ್ತದೆ. ಆ ಬಗ್ಗೆ ಅವರಿಗೆ ನಂಬಿಕೆ ಇರಬೇಕು. ಯಾರೇ ನೀಡುವ ಸಲಹೆ, ಸೂಚನೆಗಳನ್ನು ತಮ್ಮ ಅನುಭವದ ಹಾಗೂ ವೈಯಕ್ತಿಕ ತಿಳಿವಳಿಕೆ ಆಧಾರದ ಮೇಲೆ ಅಳವಡಿಸಿಕೊಳ್ಳಬೇಕು ಎಂದು ಪ್ರಧಾನಿಯವರು ಹೇಳಿದರು. ಪ್ರತಿ ವಿದ್ಯಾರ್ಥಿಯ ಕಲಿಕಾ ವೇಗದ ಬಗ್ಗೆ ಬೋಧಕ ವರ್ಗ ಸಂವೇದನಾಶೀಲರಾಗಿರಬೇಕು. ರೈತರು ಬೀಜ ಬಿತ್ತನೆ ಮೊದಲು ಅತ್ಯಂತ ಲಕ್ಷ್ಯವಹಿಸಿ ಮಣ್ಣು

ಸಿದ್ಧಗೊಳಿಸುವಂತೆ ಬೋಧಕವರ್ಗ ಕಲಿಕೆಗೆ ಮುನ್ನ ವಿದ್ಯಾರ್ಥಿಗಳ ಮನಸ್ಸನ್ನು ಸಂಯಮದಿಂದ ಪೋಷಿಸಬೇಕು ಎಂದು ಪ್ರಧಾನಿಯವರು ಹೇಳಿದರು.

<><><>

ಅಂತಾರಾಷ್ಟ್ರೀಯ ವಾಣಿಜ್ಯ ಮೇಳ-೨೦೨೪ ಹಾಗೂ ಉತ್ಪಾದನೋತ್ತರ ಕೃಷಿ-ರೈತರ ಸಬಲೀಕರಣ ಕಾರ್ಯಕ್ರಮಕ್ಕೆ ಬೆಂಗಳೂರಿನಲ್ಲಿಂದು ಚಾಲನೆ ದೊರೆಯಿತು. ಅರಮನೆ ಮೈದಾನದಲ್ಲಿ ಏರ್ಪಡಿಸಲಾಗಿದ್ದ ಈ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿಗಳನ್ನು ಅವರು ಪ್ರದಾನ ಮಾಡಿದರು. ಕೃಷಿ ಸಚಿವ ಚಲುವರಾಯಸ್ವಾಮಿ, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಲವು ಪ್ರಮುಖರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಮೂರು ದಿನಗಳ ಕಾಲ ನಡೆಯಲಿರುವ ಈ ಮೇಳದಲ್ಲಿ ಸಿರಿಧಾನ್ಯ ಹಾಗೂ ಸಾವಯವ ವಾಣಿಜ್ಯ ಧಾನ್ಯಗಳ ಕುರಿತಾದ ಪ್ರದರ್ಶನ ಏರ್ಪಡಿಸಲಾಗಿದೆ.

<><><>

ಕೇಂದ್ರ ಸಾಗರ ಮೀನುಗಾರಿಕೆ ಸಂಶೋಧನಾ ಸಂಸ್ಥೆ ಕಾರವಾರ ಪ್ರಾದೇಶಿಕ ಕೇಂದ್ರದಲ್ಲಿ ಇಂದು ೭೯ನೇ ಸಂಸ್ಥಾಪನಾ ದಿನವನ್ನು "ಓಪನ್ ಹೌಸ್" ಪ್ರದರ್ಶನದೊಂದಿಗೆ ಆಚರಿಸಲಾಯಿತು. ವಲಯ ಅರಣ್ಯಾಧಿಕಾರಿ ಗಜಾನಂದ ಕಾರ್ಯಕ್ರಮವನ್ನು ಉದ್ಘಾಟಿಸಿ, ಬದಲಾಗುತ್ತಿರುವ ವಾತಾವರಣದಲ್ಲಿ ಸಮುದ್ರ ಮೀನುಗಾರಿಕೆ ಮತ್ತು ಸಮುದ್ರ ಪರಿಸರ ವ್ಯವಸ್ಥೆಗಳು ಸೇರಿದಂತೆ ಎಲ್ಲಾ ಅಂಶಗಳ ಬಗ್ಗೆ ಹೆಚ್ಚಿನ ಜ್ಞಾನವನ್ನು ತಿಳಿದುಕೊಳ್ಳುವಂತೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ "ಓಪನ್ ಹೌಸ್", ಮೂಲಕ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಪ್ರದರ್ಶನದಲ್ಲಿ ಸಮುದ್ರ ಪಂಜರಗಳಲ್ಲಿ ಬೆಳೆಸಲಾದ ವಿವಿಧ ಜೀವಂತ ಮೀನುಗಳನ್ನು, ಸ್ಥಳೀಯ ಶಾಲೆ ಹಾಗೂ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ವೀಕ್ಷಿಸಿದರು. ಉತ್ತರ ಕನ್ನಡ ಜಿಲ್ಲೆಯ ಕರಾವಳಿಯಲ್ಲಿನ ಅಪರೂಪದ ಸಮುದ್ರ ಜೀವಿಗಳ ಮಾದರಿಗಳನ್ನು ವೀಕ್ಷಣೆಗೆ ಇಡಲಾಗಿತ್ತು.

<><><>

ದಾನಿಗಳಿಂದ ಸಂಗ್ರಹಿಸಿದ ರಕ್ತವನ್ನು ಕಡ್ಡಾಯವಾಗಿ ಪರೀಕ್ಷೆಗೆ ಒಳಪಡಿಸುವುದು ಇನ್ನು ಮುಂದೆ ಕಡ್ಡಾಯವಾಗಿದ್ದು, ಪರೀಕ್ಷೆ ನಡೆಸದೆ ರಕ್ತ ವಿತರಿಸುವ ಅಥವಾ ಮಾರಾಟ ಮಾಡುವ ಕೇಂದ್ರಗಳ

ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು" ಎಂದು ದಾವಣಗೆರೆ ಹೆಚ್ಚುವರಿ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ನಡೆದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಮನ್ವಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯ ಕೆಲವು ಖಾಸಗಿ ರಕ್ತನಿಧಿ ಕೇಂದ್ರಗಳು ಎಚ್‌ಐವಿ ಬಾಧಿತರಿಂದಲೂ ರಕ್ತ ಸಂಗ್ರಹಿಸಿ, ಸರಿಯಾದ ಪರೀಕ್ಷೆ ನಡೆಸದೆ ಮಾರಾಟ ಮಾಡುತ್ತಿವೆ ಎಂಬ ದೂರುಗಳು ಬಂದ ಹಿನ್ನೆಲೆಯಲ್ಲಿ ಈ ಸೂಚನೆ ನೀಡಲಾಗಿದೆ ಎಂದು ಹೇಳಿದರು. ಜಿಲ್ಲೆಯಲ್ಲಿ ಪ್ರತಿ ವರ್ಷ ಸುಮಾರು ೨೦೦ ಹೊಸ ಎಚ್‌ಐವಿ ಪ್ರಕರಣಗಳು ಪತ್ತೆಯಾಗುತ್ತಿದ್ದು, ತಾಯಿಯಿಂದ ಮಗುವಿಗೆ ಸೋಂಕು ಹರಡುವುದನ್ನು ತಡೆಯಲು ಗರ್ಭಿಣಿಯರಿಗೆ ಕಡ್ಡಾಯವಾಗಿ ಪರೀಕ್ಷೆ ನಡೆಸಬೇಕು. ಜಿಲ್ಲೆಯ ೬೧ ಗ್ರಾಮ ಪಂಚಾಯಿತಿಗಳನ್ನು ಕ್ಷಯಮುಕ್ತಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು ಎಂದು ಅವರು ತಿಳಿಸಿದರು.

<><><>

ಕೋಲಾರ ಜಿಲ್ಲೆಯ ಖಾಸಗಿ ಹಾಲಿನ ಕೇಂದ್ರಗಳಲ್ಲಿ ನಡೆಯುತ್ತಿದೆ ಎನ್ನಲಾದ ಕಲಬೆರೆಕೆ ಹಾಲಿನ ಮಾರಾಟ ದೂರಿನ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಇಂದು ಬೆಳಗಿನ ಜಾವ ಕಾರ್ಯಾಚರಣೆ ನಡೆಸಿತು. ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ನೇತೃತ್ವದಲ್ಲಿ ಆಹಾರ ಸುರಕ್ಷತಾ ಇಲಾಖೆಯ ೩೦ ವಿಶೇಷ ತಂಡಗಳು ವಿವಿಧ ಕೇಂದ್ರಗಳ ಮೇಲೆ ಏಕಕಾಲಕ್ಕೆ ದಾಳಿ ನಡೆಸಿದವು. ಹಾಲಿನ ಉತ್ಪಾದನಾ ಹಾಗೂ ಮಾರಾಟ ಘಟಕಗಳಿಗೆ ಅನಿರೀಕ್ಷಿತ ಭೇಟಿ ನೀಡಿದ ಅಧಿಕಾರಿಗಳು, ಯಾವುದೇ ದಾಖಲೆಗಳಿಲ್ಲದ ಹಾಗೂ ಸಂಶಯಾಸ್ಪದವಾಗಿ ಕಂಡುಬಂದ ಒಟ್ಟು ೪೦ ಹಾಲಿನ ಮಾದರಿಗಳನ್ನು ವಶಕ್ಕೆ ಪಡೆದಿದ್ದಾರೆ. ಈ ಮಾದರಿಗಳನ್ನು ಕೂಡಲೇ ಬೆಂಗಳೂರಿನ ರಾಜ್ಯ ಆಹಾರ ಪ್ರಯೋಗಾಲಯಕ್ಕೆ ವೈಜ್ಞಾನಿಕ ವಿಶ್ಲೇಷಣೆಗಾಗಿ ಕಳುಹಿಸಲಾಗಿದೆ. ಮುಳಬಾಗಿಲು ತಾಲ್ಲೂಕಿನ ಸಿ. ಕೊರವನೂರು ಗ್ರಾಮದಲ್ಲಿ ಅಕ್ರಮವಾಗಿ ಹಾಲನ್ನು ಸಾಗಾಟ ಮಾಡುತ್ತಿದ್ದ ವಾಹನವನ್ನು ತಡೆದು ತಪಾಸಣೆ ನಡೆಸಿ, ೨೮ ಕ್ಯಾನ್‌ಗಳಲ್ಲಿ ತುಂಬಿದ್ದ ಸುಮಾರು ೧೧೨೦ ಲೀಟರ್ ಹಾಲನ್ನು ಪತ್ತೆಹಚ್ಚಿ ಜಪ್ತಿ ಮಾಡಲಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

<><><>

ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ರೆಪೋದರವನ್ನು ಶೇಕಡ ೫.೨೫ರಲ್ಲೇ ಮುಂದುವರಿಸಲು ನಿರ್ಧರಿಸಿದೆ. ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರ ಪ್ರಸ್ತುತ ಹಣಕಾಸು ವರ್ಷದ ೬ನೇ ಹಾಗೂ ಅಂತಿಮ ದ್ವೈಮಾಸಿಕ ಹಣಕಾಸು ನೀತಿಯನ್ನು ಇಂದು ಪ್ರಕಟಿಸಿದರು. ೨೦೨೬-೨೭ರ ಮೊದಲ ಹಾಗೂ ಎರಡನೇ ಅವಧಿಗಾಗಿ ಸಿಪಿಐ ಏರಿಕೆ ದರವನ್ನು ಅನುಕ್ರಮವಾಗಿ ಶೇಕಡ ೪ ಹಾಗೂ ಶೇಕಡ ೪.೨ ಕ್ಕೆ ಪರಿಷ್ಕರಿಸಲಾಗಿದೆ. ಅಮೂಲ್ಯ ಲೋಹಗಳ ಬೆಲೆ ಹೆಚ್ಚಿದ ಕಾರಣ ಈ ಪರಿಷ್ಕರಣೆ ಮಾಡಲಾಗಿದೆ ಎಂದು ಹೇಳಿದರು. ಆರ್‌ಬಿಐ ೨೦೨೬-೨೭ರ ಮೊದಲ ಹಾಗೂ ಎರಡನೇ ಅವಧಿಗಾಗಿ ನೈಜ ಒಟ್ಟು ದೇಶೀಯ ಉತ್ಪನ್ನ - ಜಿಡಿಪಿ ಬೆಳವಣಿಗೆ ಅಂದಾಜನ್ನು ಶೇಕಡ ೬.೯ ಹಾಗೂ ಶೇಕಡ ೭ಕ್ಕೆ ಪರಿಷ್ಕರಿಸಿದೆ. ಅನಧಿಕೃತ ಎಲೆಕ್ಟ್ರಾನಿಕ್ ಬ್ಯಾಂಕಿಂಗ್ ವಹಿವಾಟುಗಳಲ್ಲಿ ಗ್ರಾಹಕರ ಹೊಣೆಗಾರಿಕೆಯನ್ನು ಸೀಮಿತಗೊಳಿಸುವ ಕುರಿತು ಕರಡು ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ ಪ್ರಸ್ತಾಪಿಸಲಾಗಿದೆ. ಈ ಮಾರ್ಗಸೂಚಿಗಳ ಅಡಿಯಲ್ಲಿ, ಸಣ್ಣ ಮೌಲ್ಯದ ವಂಚನೆಯ ವಹಿವಾಟುಗಳಲ್ಲಿ ಉಂಟಾದ ನಷ್ಟಕ್ಕೆ ೨೫ ಸಾವಿರ ರೂಪಾಯಿಗಳವರೆಗಿನ ಗ್ರಾಹಕರಿಗೆ ಪರಿಹಾರ ನೀಡಲು ಆರ್‌ಬಿಐ ಒಂದು ಚೌಕಟ್ಟನ್ನು ಪರಿಚಯಿಸಲು ಯೋಜಿಸುತ್ತಿದೆ ಎಂದು ಅವರು ಹೇಳಿದ್ದಾರೆ. ಸಾಲ ವಸೂಲಾತಿ ಮತ್ತು ವಸೂಲಾತಿ ಏಜೆಂಟರುಗಳ ನಿಯೋಜನೆಗೆ ಸಂಬಂಧಿಸಿದಂತೆ ಕರಡು ಮಾರ್ಗದರ್ಶಿಗಳನ್ನು ಹೊರಡಿಸಲು ರಿಸರ್ವ್ ಬ್ಯಾಂಕ್ ಯೋಜಿಸಿದೆ ಎಂದು ಆರ್‌ಬಿಐ ಗರ್ವನರ್ ಸಂಜಯ್ ಮಲ್ಹೋತ್ರ ತಿಳಿಸಿದರು. ಲೀಡ್ ಬ್ಯಾಂಕ್, ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆ ಹಾಗೂ ಬಿಸಿನೆಸ್ ಕರೆಸ್ಪಾಡೆಂಟ್ ಮಾದರಿಗೆ ಸಂಬಂಧಿಸಿದಂತೆ ಪರಿಷ್ಕೃತ ಕರಡು ನಿಯಾಮವಳಿಗಳನ್ನು ಆರ್‌ಬಿಐ ಪ್ರಕಟಿಸಲಿದೆ ಎಂದು ಅವರು ಹೇಳಿದರು.

<><><><>

ಹಾವೇರಿ ಜಿಲ್ಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಮೊಬೈಲ್ ಸ್ವಿಚ್ ಆಫ್ ಹಾಗೂ ಟಿ.ವಿ. ಬಂದ್ ಮಾಡಿಸುವ ಡಿಜಿಟಲ್ ಲಾಕ್ ಪ್ರಯೋಗಕ್ಕೆ ಮುಂದಾಗಿದೆ. ಜಿಲ್ಲೆಯಾದ್ಯಂತ ಡಿಜಿಟಲ್ ಲಾಕ್ ವ್ಯವಸ್ಥೆ ಜಾರಿಗೊಳಿಸಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಉಪನಿರ್ದೇಶಕ ಮೋಹನ್ ದಂಡಿನ್ ತಿಳಿಸಿದ್ದಾರೆ. ಪಂಚಾಯತ್

ಅಧಿಕಾರಿಗಳಿಗೂ ಈ ಬಗ್ಗೆ ಪತ್ರ ಬರೆದು ಪ್ರಯೋಗಕ್ಕೆ ಕೈಜೋಡಿಸುವಂತೆ ಕೋರಿರುವುದಾಗಿ ತಿಳಿಸಿದ್ದಾರೆ.

**ಧ್ವನಿ : ಮೋಹನ್ ದಂಡಿನ್ (೨೯ ಸೆಕೆಂಡ್‌ಗಳು)**

ಪೋಷಕರು ಹಾಗೂ ಮನೆಯಲ್ಲಿರುವವರು ಸಂಜೆ ೬ ರಿಂದ ರಾತ್ರಿ ೯ಗಂಟೆಯವರೆಗೆ ಮೊಬೈಲ್, ಟಿ.ವಿ. ಉಪಯೋಗ ಮಾಡದೇ ಮಕ್ಕಳ ಓದಿಗೆ ಸಹಕರಿಸಬೇಕು ಎಂದು ಹೇಳಿದ್ದಾರೆ.

<><><><>

ದಕ್ಷಿಣಕನ್ನಡ ಜಿಲ್ಲಾ ಮಟ್ಟದ ಉದ್ಯೋಗ ಮೇಳ 'ವಿವೇಕ ಉದ್ಯೋಗ ೨೦೧೯' ಇದೇ ೨೧ರಂದು ಪುತ್ತೂರಿನ ವಿವೇಕಾನಂದ ಇಂಜಿನಿಯರಿಂಗ್ ಕಾಲೇಜು ಆವರಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಕೆ.ಇ.ಜಯರಾಮ್ ತಿಳಿಸಿದ್ದಾರೆ. ಈ ಮೇಳದಲ್ಲಿ ೮೦ಕ್ಕೂ ಅಧಿಕ ಕಂಪೆನಿಗಳು ಸೇರಿದಂತೆ ೧೫೦ಕ್ಕೂ ಅಧಿಕ ಉದ್ಯಮ ಪ್ರತಿನಿಧಿಗಳು ಭಾಗವಹಿಸಲಿವೆ. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ದೀನ್‌ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ದೀನ್ ದಯಾಳ್ ಅಂತ್ಯೋದಯ ಯೋಜನೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಇದರ ಆಶ್ರಯದಲ್ಲಿ ಉದ್ಯೋಗ ಮೇಳ ಏರ್ಪಡಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><><>

ಯಾದಗಿರಿಯ ಡಾ.ಬಿ.ಆರ್. ಅಂಬೇಡ್ಕರ್ ನಗರದಲ್ಲಿ ಆರ್‌ಐಡಿಎಫ್ ಯೋಜನೆ ಅಡಿಯಲ್ಲಿ ೮೦ ಲಕ್ಷ ರೂಪಾಯಿ ಅನುದಾನದಲ್ಲಿ ನಿರ್ಮಿಸಲು ಉದ್ದೇಶಿಸಲಾದ ಪ್ರಾದೇಶಿಕ ಸಂಶೋಧನಾ ಪ್ರಯೋಗಾಲಯಕ್ಕಾಗಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಇಂದು ಭೂಮಿಪೂಜೆ ನೆರವೇರಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>